ಈ) 4.54 ಲಕ್ಷ ಉದ್ಯೋಗ ಸೃಷ್ಟಿಯಲ್ಲಿ ಹುಮ್ನಾಬಾದ್ ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ನೀಡಲಾಗಿದೆ? (ಸಂಪೂರ್ಣ ವಿವರ ಒದಗಿಸುವುದು)

ಶ್ರೀ ನರಸಿಂಹನಾಯಕ (ರಾಜುಗೌಡ) (ಸಣ್ಣ ಕೈಗಾರಿಕಾ ಸಚಿವರು) :

ಅ) ರಾಜ್ಯದಲ್ಲಿ ಕಳೆದ 4 ವರ್ಷಗಳಲ್ಲಿ 72,355 ಸಣ್ಣ ಕೈಗಾರಿಕಾ ಘಟಕಗಳು ನೋಂದಣಿಯಾಗಿದ್ದು, ನೋಂದಾಯಿತ ಘಟಕಗಳ ಮೇಲೆ ಹೂಡಿಕೆಯಾಗಿರುವ ಬಂಡವಾಳ ರೂ.5,04,697.27 ಲಕ್ಷ ಆಗಿದ್ದು, ಈ ಘಟಕಗಳಿಂದ ಅಂದಾಜು 4,55,811 ಮಂದಿಗೆ ಉದ್ಯೋಗ ಸೃಜಿಸಿರುವುದು ನೋಂದಣಿಯ ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯಿಂದ ತಿಳಿದುಬಂದಿದೆ.

ಆ) ಹುಮ್ನಾಬಾದ್ ವಿಧಾನಸಭಾ ಮತ ಕ್ಷೇತ್ರದಲ್ಲಿ 37 ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಘಟಕಗಳು ಸ್ಥಾಪನೆಯಾಗಿದ್ದು, ಈ ಘಟಕಗಳ ಮೇಲೆ ರೂ. 743.32 ಲಕ್ಷ ಬಂಡವಾಳ ಹೂಡಿಕೆಯಾಗಿದ್ದು, 473 ಜನರಿಗೆ ಉದ್ಯೋಗ ಸೃಜನೆಯಾಗಿರುವುದು ತಿಳಿದು ಬಂದಿದೆ.

ಇ) ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಪೂರಕ ಕೈಗಾರಿಕಾ ಮೂಲ ಸೌಕರ್ಯಗಳನ್ನು ಕೆಎಸ್ಎಸ್ಐಡಿಸಿ/ಕೆಐಎಡಿಬಿ ವತಿಯಿಂದ ಕಲ್ಪಿಸಲಾಗುತ್ತಿದೆ. ಇಲಾಖೆಯಿಂದ ನೇರವಾಗಿ ಯಾವುದೇ ಕಾಮಗಾರಿಗಳನ್ನು ನಿರ್ವಹಿಸಲು ಅವಕಾಶವಿರುವುದಿಲ್ಲ.

ಈ) ಹುಮ್ನಾಬಾದ್ ವಿಧಾನಸಭಾ ಕ್ಷೇತ್ರದಲ್ಲಿ 473 ಜನರಿಗೆ ಉದ್ಯೋಗ ಒದಗಿಸಿರುವುದು ನೋಂದಣಿಯ ಅರ್ಜಿಯಲ್ಲಿ ಉದ್ದಿಮೆದಾರರು ನೀಡಿರುವ ಅಂಕಿ ಅಂಶಗಳಿಂದ ತಿಳಿದುಬಂದಿದೆ.

ಮಹಾನ್ ವ್ಯಕ್ತಿಗಳ ಜಯಂತಿಯ ಆಚರಣೆ

606 (600) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಮಹಾನ್ ವ್ಯಕ್ತಿಗಳ ಜಯಂತಿಯನ್ನು ಆಚರಿಸಲು ಸರ್ಕಾರ ಹಣ ಬಿಡುಗಡೆಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಾರಣಗಳೇನು? (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಚರಿಸಲಾಗುವ ರಾಜ್ಯದ ಮಹಾನ್ ವ್ಯಕ್ತಿಗಳ ಜಯಂತಿ ಆಚರಣೆಗೆ ಸರ್ಕಾರದಿಂದ ಹಣ ಬಿಡುಗಡೆ ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಪ್ರತಿದಿನ ಉತ್ಪಾದನೆಯಾಗುವ ಇ-ತ್ಯಾಜ್ಯ ವಿಲೇವಾರಿ

588 (188) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ.ಲೇಔಟ್) : ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಬೆಂಗಳೂರು ನಗರದಲ್ಲಿ ಪ್ರತಿ ದಿನ ಉಂಟಾಗುವ ಇ-ತ್ಯಾಜ್ಯ ಅಂದರೆ ಹಳೆಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಇತ್ಯಾದಿ ಪ್ರಮಾಣವೆಷ್ಟು?

ಆ) ಇ-ತ್ಯಾಜ್ಯ ಸರಿಯಾಗಿ ವಿಲೇವಾರಿಯಾಗದೆ ಪರಿಸರಕ್ಕೆ ಧಕ್ಕೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಇ-ತ್ಯಾಜ್ಯವನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್. ಶಿವಣ್ಣ (ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಬೆಂಗಳೂರು ನಗರದಲ್ಲಿ ಪ್ರತಿದಿನ ಸುಮಾರು 6.74 ಮೆಟ್ರಿಕ್ ಟನ್ ಇ-ತ್ಯಾಜ್ಯ ಉತ್ಪತ್ತಿಯಾಗುತ್ತಿದೆ.

ಆ) ಅಂತಹ ಯಾವುದೇ ಘಟನೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ)

i) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಇದುವರೆಗೆ 40 ಉದ್ದಿಮೆಗಳಿಗೆ ಇ-ತ್ಯಾಜ್ಯವನ್ನು